ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೫

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

### ಶುಕ್ರವಾರ, ದಿನಾಂಕ: ೧೧ನೇ ಜುಲೈ, ೨೦೧೪

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಯಗಚಿ ಜಲಾಶಯದ ಹಿನ್ನೀರು ಪ್ರದೇಶದಲ್ಲಿ

## ಕುಡಿಯುವ ನೀರಿನ ಸಮಸ್ಯೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧೧ (೧೧೮೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೇಲೂರು ತಾಲ್ಲೂಕಿನ ಯಗಚಿ ಜಲಾಶಯದ ಹಿನ್ನೀರಿನ ಆಸುಪಾಸಿನ ನಾರಾಯಣಪುರ ಗ್ರಾಮದಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಕುಡಿಯುವ ನೀರನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ನಾರಾಯಣಪುರ ಗ್ರಾಮದಲ್ಲಿ ಕಳೆದ ವರ್ಷ ಸುವರ್ಣ ಗ್ರಾಮ ಯೋಜನೆಯಡಿ ಅಭಿವೃದ್ಧಿಗೆ ಮಂಜೂರು ಮಾಡಿರುವ ಮೊಬಲಗೆಷ್ಟು ;

(ಈ) ಸುವರ್ಣಗ್ರಾಮ ಯೋಜನೆಯಡಿ ಮಾಡಿರುವ ಸದರಿ ಕಾಮಗಾರಿ ಒಂದೇ ವರ್ಷದಲ್ಲಿ ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಉ) ಕಳಪೆ ಕಾಮಗಾರಿ ನಿರ್ವಹಿಸಿರುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ನೀಡಿರುವ ಮನೆಗಳು ಮತ್ತು ನಿವೇಶನಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧೨ (೧೨೪೮) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಿಂದ ವಸತಿ ಇಲಾಖೆಯಲ್ಲಿ ಹಂಚಿಕೆ ಮಾಡಿರುವ ಮನೆಗಳು ಮತ್ತು ನಿವೇಶನಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ನೀಡಿರುವ ಮನೆಗಳು ಮತ್ತು ನಿವೇಶನಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ

**ಡಾ|| ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧೩ (೧೨೪೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ೨೦೧೧–೧೨, ೨೦೧೨–೧೩ ಮತ್ತು ೨೦೧೩–೧೪ನೇ ಸಾಲಿನಲ್ಲಿ ಒದಗಿಸಲಾದ ಅನುದಾನ ಮತ್ತು ಮಾಡಲಾದ ವೆಚ್ಚ ಹಾಗೂ ನಿರ್ವಹಣೆಯಾದ ಹಣವೆಷ್ಟು ; (ವಿವರಗಳನ್ನು ನೀಡುವುದು)

(ಆ) ಅಧಿಕಾರಿಗಳ ಬೇಜವಾಬ್ದಾರಿ, ಅವ್ಯವಹಾರಗಳಿಂದ ಕೇಂದ್ರ ಸರ್ಕಾರದ ಈ ಕಾನೂನು ಬದ್ಧ ಯೋಜನೆಯು ಪರಿಣಾಮಕಾರಿಯಾಗಿ ಅನುಷ್ಠಾನವಾಗದೇ ಅಭಿವೃದ್ಧಿ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಒದಗಿಸಲಾದ ಹಣವನ್ನು ವೆಚ್ಚ ಮಾಡದೇ ಕರ್ತವ್ಯ ನಿರ್ಲಕ್ಷತೆ ತೋರಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆಯೇ ? (ವಿವರಗಳನ್ನು ನೀಡುವುದು)

## ಕುಡಿಯುವ ನೀರು ಯೋಜನೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧೪ (೧೨೧೭) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ಶ್ರೀರಂಗಪಟ್ಟಣ ತಾಲ್ಲೂಕಿನ ಎಲೆಚಾಕನಹಳ್ಳಿ ಕುಡಿಯುವ ನೀರಿನ ಯೋಜನೆ ಯಾವ ಹಂತದಲ್ಲಿದೆ ; ಎಲೆಚಾಕನಹಳ್ಳಿ ಕುಡಿಯುವ ನೀರಿಗಾಗಿ ಬಿಡುಗಡೆ ಮಾಡಿರುವ ಹಣವೆಷ್ಟು ; ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಆ) ಹೇಮಾವತಿ ನಾಲೆಯಿಂದ ನಾಗಮಂಗಲ ತಾಲ್ಲೂಕಿನ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಸರ್ಕಾರದ ಕಾರ್ಯಕ್ರಮಗಳ ಯೋಜನೆಯಲ್ಲಿರುವುದೇ ; ಇದ್ದರೆ, ಈಗಾಗಲೇ ನಾಗಮಂಗಲದಲ್ಲಿ ಎಷ್ಟು ಕೆರೆಗಳನ್ನು ತುಂಬಿಸಲಾಗಿದೆ ;

(ಇ) ಮೂರು ವರ್ಷದಿಂದ ನಾಗಮಂಗಲದ ಬಹುತೇಕ ಕೆರೆಗಳಿಗೆ ನೀರನ್ನು ತುಂಬಿಸಿರುವುದಿಲ್ಲ. ಇದರ ಬಗ್ಗೆ ಸರ್ಕಾರ ಗಮನ ಹರಿಸುವುದೆ ; (ಉದಾಹರಣೆ : ದೇವಲಾಪುರ ಕೆರೆ, ಭೀಮನಹಳ್ಳಿ ಕೆರೆ, ನಗರಗಾಲ ಕೆರೆ, ಮುರಹಳ್ಳದ ಕೆರೆ, ಹೀಗೆ ಬಹುತೇಕ ಕೆರೆಗಳಿಗೆ ನೀರು ತುಂಬಿಸಿರುವುದಿಲ್ಲ) ಯಾವಾಗ ಕೆರೆಗಳನ್ನು ತುಂಬಿಸಲಾಗುವುದು ;

(ಈ) ಸದರಿ ಯೋಜನೆಯಡಿಯಲ್ಲಿ ಮಾಗಡಿ, ಕುಣಿಗಲ್ ಕೆರೆಗಳನ್ನು ತುಂಬಿಸಲು ಯೋಜನೆ ರೂಪಿಸಲಾಗಿದೆಯೇ ; ರೂಪಿಸಿದ್ದರೆ, ಯೋಜನೆಗೆ ಮೀಸಲಿಟ್ಟ ಹಣವೆಷ್ಟು ; ಯಾವಾಗ ಕೆರೆಗಳನ್ನು ತುಂಬಿಸಲಾಗುವುದು ;

(ಉ) ಹೇಮಾವತಿಯಿಂದ ತಿಪ್ಪಗೊಂಡನಹಳ್ಳಿ ಜಲಾಶಯಕ್ಕೆ ನೀರು ಹರಿಸಲು ಸರ್ಕಾರದ ಯೋಜನೆಯಲ್ಲಿರುವುದೇ ; ಇದ್ದಲ್ಲಿ, ಯೋಜನೆಯ ಕಾರ್ಯಸೂಚಿ ಏನು ; ಇಲ್ಲದಿದ್ದರೆ, ಯೋಜನೆ ರೂಪಿಸಲು ಎದುರಾಗಿರುವ ತೊಂದರೆಯಾದರೂ ಏನು ?

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಜಮೀನಿಗೆ ನಗರಾಭಿವೃದ್ಧಿ ಇಲಾಖೆಯಿಂದ ಏಕ ನಿವೇಶನ ನಕ್ಷೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧೫ (೧೧೯೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ನಮೂನೆ ೯ ಮತ್ತು ೧೧ನ್ನು ನೀಡುವಾಗ ತಾಂತ್ರಿಕ ದೋಷದಿಂದ ಸರಿಯಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನಮೂನೆ ೯ ಮತ್ತು ೧೧ನ್ನು ನೀಡುವಾಗ ನಗರ ವ್ಯಾಪ್ತಿಯಲ್ಲಿ ಬರುವ ಪಂಚಾಯಿತಿಗಳು ಎಷ್ಟು ;

(ಇ) ನಗರಾಭಿವೃದ್ಧಿ ಪ್ರಾಧಿಕಾರದಿಂದ ಏಕ ನಿವೇಶನ ನಕ್ಷೆಯ ದಾಖಲಾತಿ ಕೇಳುವುದರಿಂದ ಜನಸಾಮಾನ್ಯರಿಗೆ ಕಷ್ಟವಾಗುತ್ತಿರುವುದು ಸರ್ಕಾರಕ್ಕೆ ಅರಿವಿದೆಯೇ ;

(ಈ) ದಿನಾಂಕ : ೨೩-೦೬-೨೦೧೩ರ ನಂತರ ಖಾತಾ ಪರಿವರ್ತನೆಯಾದ ಸರ್ವೆ ನಂಬರ್‌ಗಳ ಆಸ್ತಿಯನ್ನು ವರ್ಗಾವಣೆ ಮಾಡುವಾಗ ಅವುಗಳಿಗೆ ನಿಯಮಾವಳಿಗಳನ್ನು ಸರ್ಕಾರ ರೂಪಿಸಿದೆಯೇ ;

(ಉ) ರೂಪಿಸದಿದ್ದಲ್ಲಿ, ಸರ್ಕಾರ ಯಾವಾಗ ನಿಯಮಾವಳಿ ರೂಪಿಸಿ, ಅನುಷ್ಠಾನಕ್ಕೆ ತರಲಾಗುವುದು ; (ವಿವರ ನೀಡುವುದು)

(ಊ) ಪಂಚಾಯಿತಿ ವ್ಯಾಪ್ತಿಗೆ ಸೇರಿದ ಆಸ್ತಿಯನ್ನು ಪಂಚಾಯಿತಿ ಗಮನಕ್ಕೆ ಬಾರದೇ ಅಕ್ರಮ ನೋಂದಣಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಋ) ಸದರಿ ಅಕ್ರಮದ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಅರ್ಧದಲ್ಲಿ ಶಾಲೆ ಬಿಟ್ಟ ಮಕ್ಕಳು ಮತ್ತು ಯೋಜನೆಗಳ ನಿಷ್ಫಲತೆ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು)** –

೨೧೬ (೧೧೬೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಶಾಲೆಗಳಿಗೆ ದಾಖಲಾಗಿ ಅರ್ಧದಲ್ಲಿಯೇ ಶಾಲೆ ಬಿಟ್ಟ ಮಕ್ಕಳ ಸಂಖ್ಯೆಯ ಅಂದಾಜು ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಕಳೆದ ೫ ವರ್ಷಗಳ ಅವಧಿಯಲ್ಲಿ ಶಾಲೆ ಬಿಟ್ಟ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಷವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಮಕ್ಕಳು ಅರ್ಧದಲ್ಲಿಯೇ ಶಾಲೆ ಬಿಡಲು ಕಾರಣವಾದ ಅಂಶಗಳ ಕುರಿತು ಅಧ್ಯಯನ ನಡೆಸಲಾಗಿದೆಯೇ ; ಹಾಗಿದ್ದಲ್ಲಿ, ಕಂಡುಕೊಂಡ ಅಂಶಗಳ ಮಾಹಿತಿ ಒದಗಿಸುವುದು ;

(ಇ) ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ತರುವ ನಿಟ್ಟಿನಲ್ಲಿ ಕೈಗೊಂಡ ಯೋಜನೆ, ಕಾರ್ಯಕ್ರಮಗಳು, ಒದಗಿಸಲಾದ ಸೌಲಭ್ಯಗಳು ಯಾವುವು ; ಇದಕ್ಕಾಗಿ ಒದಗಿಸಲಾದ ಕೇಂದ್ರ, ರಾಜ್ಯದ ಅನುದಾನ ಹಣ ಎಷ್ಟು ; ಪ್ರತ್ಯೇಕವಾಗಿ ವರ್ಷಾವಾರು, ಯೋಜನೆ, ಕಾರ್ಯಕ್ರಮ, ವಿದ್ಯಾರ್ಥಿಗಳಿಗೆ ಒದಗಿಸಿದ ಸೌಲಭ್ಯ, ಅನುದಾನ ಇವುಗಳ ಮಾಹಿತಿ ಒದಗಿಸುವುದು ;

(ಈ) ಅತಿ ಹೆಚ್ಚಿನ ಅನುದಾನ ಹಣ ವಿನಿಯೋಗವಾಗುತ್ತಿದ್ದರೂ ಸಹ ಮಕ್ಕಳನ್ನು ಶಾಲೆಗಳಲ್ಲಿ ಉಳಿಸಿಕೊಳ್ಳುವ, ಮರಳಿ ಶಾಲೆಗಳತ್ತ ದಾಖಲಿಸುವಲ್ಲಿ ವಿಫಲವಾಗುತ್ತಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಪರಿಹಾರ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (PDO)

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೨೧೭ (೧೧೭೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾಂ ಜಿಲ್ಲೆಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (PDO) ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ರೂಪುರೇಷೆಗಳೇನು ;

(ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

## ಚಿತ್ರನಗರಿ (Film City) ನಿರ್ಮಾಣ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) –**

೨೧೮ (೧೨೦೮) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡನಾಡು ಇತರ ರಾಜ್ಯಗಳಿಗಿಂತ ನೈಸರ್ಗಿಕವಾಗಿ, ಸಾಂಸ್ಕೃತಿಕವಾಗಿ ಐತಿಹಾಸಿಕ ವೈಭವವುಳ್ಳ ಸುಂದರ ನಾಡು ಮತ್ತು ಚಲನಚಿತ್ರ ಚಿತ್ರೀಕರಣಗಳಿಗೆ ಪೂರಕ ಹವಾಮಾನವನ್ನು ಹೊಂದಿರುತ್ತದೆ. ಪರಭಾಷಾ ಚಿತ್ರಗಳೂ ಚಿತ್ರೀಕರಣ ನಡೆಸುವುದರ ಜೊತೆಗೆ ಪ್ರವಾಸೋದ್ಯಮವು ಅಭಿವೃದ್ಧಿಯಾಗುವ ನಿಟ್ಟಿನಲ್ಲಿ ಚಿತ್ರನಗರಿ (Film City) ನಿರ್ಮಿಸುವ ವಿಚಾರ ಯಾವ ಹಂತದಲ್ಲಿದೆ ; ಸರ್ಕಾರದ ಈ ಭರವಸೆ ಯಾವಾಗ ಸಾಕಾರಗೊಳ್ಳುತ್ತದೆ ?

## ವಸತಿ ಯೋಜನೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೧೯ (೧೧೭೭) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ೨೦೦೨--೨೦೦೩, ೨೦೦೩–೨೦೦೪ನೇ ಸಾಲಿನವರೆಗೆ ಮಂಜೂರಾತಿ ನೀಡಿರುವ ಅಂಬೇಡ್ಕರ್, ಬಸವ, ಇಂದಿರಾ ಮನೆಗಳ ಸಂಖ್ಯೆ ಎಷ್ಟು ; (ಗ್ರಾಮ ಪಂಚಾಯಿತಿವಾರು ವಿವರ ನೀಡುವುದು)

(ಆ) ಮಂಜೂರಾತಿ ನಂತರ ಪ್ರಾರಂಭವಾಗದೆ ಉಳಿದಿರುವ ಮನೆಗಳ ಸಂಖ್ಯೆ ಎಷ್ಟು ;

(ಇ) ಪ್ರಾರಂಭವಾಗದೆ ಇರುವ ಮನೆಗಳನ್ನು ಪುನಃ ವಿತರಿಸಲು ಸರ್ಕಾರದಿಂದ ತೆಗೆದುಕೊಳ್ಳುವ ಕ್ರಮಗಳೇನು ;

(ಈ) ಪುನಃ ಪ್ರಾರಂಭಿಸಿದ ಮನೆಗಳಿಗೆ ಸರ್ಕಾರ ನೀಡುವ ಸಹಾಯ ಧನ ಎಷ್ಟು ?

## ವಿದ್ಯಾರ್ಥಿಗಳಿಗೆ ನೀಡಲಾದ ಗಣಕ ಯಂತ್ರಗಳು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೨೦ (೧೧೯೮) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ೨೦೧೪–೧೫ನೇ ಸಾಲಿನಲ್ಲಿ ವಿತರಿಸಲಾದ ಕಂಪ್ಯೂಟರ್‌ಗಳ ವಿವರ ಸರ್ಕಾರದ ಗಮನದಲ್ಲಿದೆಯೇ ; (ಬಂದಿದ್ದಲ್ಲಿ, ವಿವರ ನೀಡುವುದು)

(ಆ) ಟೆಂಡರ್‌ನಲ್ಲಿ ಭಾಗವಹಿಸಿದ ಸಂಸ್ಥೆಗಳು ಎಷ್ಟು ; ಹಾಗೂ ಯಾವ ಯಾವ ಸಂಸ್ಥೆಗಳು ಭಾಗವಹಿಸಿದ್ದವು ; ಟೆಂಡರ್‌ನಲ್ಲಿ ಭಾಗವಹಿಸಲು ಯಾವ ಮಾನದಂಡಗಳನ್ನು ವಿಧಿಸಲಾಗಿತ್ತು ;

(ಇ) ರಾಜ್ಯದಲ್ಲಿ ಒಟ್ಟು ವಿತರಣೆಯಾದ ಕಂಪ್ಯೂಟರ್‌ಗಳ ಸಂಖ್ಯೆ ಹಾಗೂ ಗುಣಮಟ್ಟದ ಬಗ್ಗೆ ಸರ್ಕಾರದ ನಿಲುವೇನು ; ಈಗಾಗಲೇ ಹಲವು ಶಾಲೆಗಳಲ್ಲಿ ಸರ್ಕಾರದಿಂದ ವಿತರಣೆಯಾದ ಕಂಪ್ಯೂಟರ್‌ಗಳು ಕೆಟ್ಟುಹೋಗಿವೆ ಎಂಬುದು ನಿಜವೇ ; ಹಾಗಿದ್ದಲ್ಲಿ, ಹಾಳಾದ ಕಂಪ್ಯೂಟರ್‌ಗಳ ಸಂಖ್ಯೆ ಎಷ್ಟು ಹಾಗೂ ಅವುಗಳ ಬದಲಿಗೆ ಬೇರೆ ಕಂಪ್ಯೂಟರ್‌ಗಳ ವ್ಯವಸ್ಥೆ ಮಾಡಲಾಗಿದೆಯೇ ?

## ಬೇಸಿಗೆಯಲ್ಲಿ ಕುಡಿಯುವ ನೀರಿನಿಂದ ಬಳಲಿದ ಗ್ರಾಮಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೨೧ (೧೨೪೪) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಕಳೆದ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದ ಬಳಲಿದ ಗ್ರಾಮಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಗ್ರಾಮಗಳಿಗೆ ಕುಡಿಯುವ ನೀರಿನ ಸರಬರಾಜಿಗೆ ಇಲಾಖೆಯವರು ಕೈಗೊಂಡ ಕ್ರಮಗಳೇನು ;

(ಇ) ಬೋರ್‌ವೆಲ್ ಹಾಕಿದರೂ ನೀರು ಬಾರದೇ ಇರುವ ಪ್ರಕರಣಗಳಲ್ಲಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಿದ ಪ್ರಕರಣಗಳು ಇವೆಯೇ ; ಇದ್ದಲ್ಲಿ, ವಿವರಗಳನ್ನು ಪೂರೈಸುವುದು ;

(ಈ) ಗ್ರಾಮದಲ್ಲಿ ಖಾಸಗಿಯಾಗಿ ಗುತ್ತಿಗೆ ಆಧಾರದ ಮೇಲೆ ನೀರು ಸರಬರಾಜು ಮಾಡಿದ ಎಷ್ಟು ಪ್ರಕರಣಗಳಿವೆ ; (ವಿವರಗಳನ್ನು ತಾಲ್ಲೂಕುವಾರು ನೀಡುವುದು)

(ಉ) ಖಾಸಗಿಯಾಗಿ ನೀರು ಪಡೆದುಕೊಂಡಂತಹ ಪ್ರಕರಣಗಳಿಗೆ ಪ್ರತಿ ತಿಂಗಳು ಪೂರೈಕೆ ಮಾಡುತ್ತಿರುವ ಅನುದಾನ ಎಷ್ಟು ;

(ಊ) ಖಾಸಗಿಯಾಗಿ ನೀರು ಪೂರೈಕೆ ಮಾಡಿದ ಎಲ್ಲಾ ಪ್ರಕರಣಗಳಿಗೆ ಅನುದಾನವನ್ನು ಸಮರ್ಪಕವಾಗಿ ಪೂರೈಸಲಾಗಿದೆಯೇ ; ಬಾಕಿ ಉಳಿದಿರುವ ಪ್ರಕರಣಗಳೇನಾದರೂ ಇವೆಯೇ ; ಇದ್ದಲ್ಲಿ, ಬಾಕಿ ಉಳಿದಿರಲು ಕಾರಣಗಳೇನು ? (ವಿವರಗಳನ್ನು ನೀಡುವುದು)

## ಬಿಸಿಯೂಟದಿಂದ ಅಸ್ವಸ್ಥರಾದ ಮಕ್ಕಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೨೨೨ (೧೨೩೯) ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಶೈಕ್ಷಣಿಕ ವರ್ಷದಲ್ಲಿ ಶಾಲೆಗಳಲ್ಲಿ ನೀಡುವ ಬಿಸಿಯೂಟದಿಂದ ಮಕ್ಕಳು ಅಸ್ವಸ್ಥರಾದ ಎಷ್ಟು ಪ್ರಕರಣಗಳು ವರದಿಯಾಗಿವೆ ; ಈ ರೀತಿಯಾಗಿ ಮಕ್ಕಳಿಗೆ ಕಳಪೆ ಆಹಾರ ನೀಡಿದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಮಕ್ಕಳಿಗೆ ಆಹಾರವನ್ನು ನೀಡುವ ಮೊದಲು ಅದನ್ನು ಪರಿಶೀಲನೆ ಮಾಡಿ ನಂತರ ನೀಡುವ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಇ) ಗುಣಮಟ್ಟದ ಆಹಾರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪದವಿ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ಕೊರತೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೨೩ (೧೧೮೩) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯ ಎಲ್ಲಾ ಪದವಿ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರಿಂದ ದೈಹಿಕ ಶಿಕ್ಷಣ ನೀಡಲಾಗುತ್ತಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಜಿಲ್ಲೆಯ ಎಷ್ಟು ಪದವಿ ಕಾಲೇಜುಗಳಲ್ಲಿ ದೈಹಿಕ ಶಿಕ್ಷಕರ ಕೊರತೆ ಇದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕೊರತೆ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ?

## ವಿವಿಧ ಯೋಜನೆಗಳ ಅಡಿಯಲ್ಲಿ ಮನೆಗಳ ನಿರ್ಮಾಣ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)** –

೨೨೪ (೧೨೧೩) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಬೀದರ್ ಜಿಲ್ಲೆಯ ೬ ವಿಧಾನ ಸಭಾ ಕ್ಷೇತ್ರದಲ್ಲಿ ವಿವಿಧ ಗ್ರಾಮ ಪಂಚಾಯಿತಿಗಳಿಗೆ ವಿವಿಧ ಯೋಜನೆಯಡಿಯಲ್ಲಿ ಸರಕಾರ ಮಂಜೂರು ಮಾಡಿರುವ ಮನೆಗಳ ಸಂಖ್ಯೆ ಎಷ್ಟು ; ಹಾಗೆ ಹಂಚಿಕೆ ಮಾಡಲಾದ ಫಲಾನುಭವಿಗಳ ಹೆಸರು, ಯೋಜನೆಗಳವಾರು, ಗ್ರಾಮ ಪಂಚಾಯತ್‌ಗಳವಾರು, ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು ;

(ಆ) ಮಂಜೂರು ಮಾಡದೆ ತಡೆಹಿಡಿಯಲಾದ ಮನೆಗಳ ಸಂಖ್ಯೆ ಎಷ್ಟು ; ಈ ರೀತಿ ತಡೆಹಿಡಿಯಲಾಗಿರುವುದೇಕೆ, ಕಾರಣಗಳೇನು ;

(ಇ) ಜಿಲ್ಲೆಯಲ್ಲಿ ಒಟ್ಟು ಎಷ್ಟು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; (ಪದನಾಮದೊಂದಿಗೆ ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; ಯಾವಾಗ ಭರ್ತಿ ಮಾಡಿಕೊಳ್ಳಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಚಿತ್ರೀಕರಣಕ್ಕೆ ಪ್ರಾಯೋಜಕತ್ವ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೨೫ (೧೧೬೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸ್ಥಳಗಳನ್ನು 'ಪ್ರವಾಸಿ ಸ್ಥಳ' ಎಂದು ಸರ್ಕಾರ ಘೋಷಣೆ ಮಾಡಿದೆ ; ಅವುಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ಹೊರ ರಾಜ್ಯಗಳಲ್ಲಿ ಪ್ರಚಾರ ಮತ್ತು ಆಕರ್ಷಣೆ ಹೆಚ್ಚು ಮಾಡುವ ಉದ್ದೇಶದಿಂದ, ಸರ್ಕಾರ ಘೋಷಿಸಿರುವ ಪ್ರವಾಸಿ ಸ್ಥಳಗಳಲ್ಲಿ ಚಲನಚಿತ್ರಗಳ ಚಿತ್ರೀಕರಣಕ್ಕೆ ಅನುಮತಿ ಜೊತೆಗೆ ಪ್ರಾಯೋಜಕತ್ವವನ್ನೂ ನೀಡುತ್ತಿರುವ ಮಾಹಿತಿ ಇದೆಯೇ ;

(ಇ) ಇದ್ದಲ್ಲಿ ಅಥವಾ ಇಲ್ಲದಿದ್ದಲ್ಲಿ, ರಾಜ್ಯದ ಯಾವುದೇ ಪ್ರವಾಸಿ ಸ್ಥಳಗಳಲ್ಲಿ ಚಿತ್ರೀಕರಣ ನಡೆಸಲು ಇಚ್ಛಿಸಿದರೆ, ಅನುಮತಿ ಜೊತೆಗೆ ಪ್ರಾಯೋಜಕತ್ವವನ್ನೂ ನೀಡಲು ಸರ್ಕಾರ ಚಿಂತಿಸುವುದೇ ?

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 342, ಪ್ರತಿಗಳು– 1500 – ಪಿ.8